<u>ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಸೇಡಂ.</u>

ಸಿ.ಸಿ. ನಂಃ 164-15 ಸಿಡಬ್ಲೂ: 10 ಪಿಡಬ್ಲೂ: 7

ಪ್ರಮಾಣವಚನ ಬೋಧಿಸಲಾಯಿತು ದಿಃ 20-02-2026

ಹೆಸರು : ಪಿ ಎಸ್ ವನಂಜಕರ್

ತಂದೆ ಹೆಸರು : ಶಿವಪ್ಪ

ವಯಸ್ಸು : 43 ವರ್ಷ

ಉದ್ಯೋಗ : ಪಿ ಐ ಶಹಬಾದ್ ಪಿ ಎಸ್

ವಾಸಸ್ಥಳ : ಶಹಬಾದ್

**:ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ:**

ನಾನು 10-12-2012 ರಿಂದ 25-08-2014 ವರೆಗೆ ಸೇಡಂ ಪೋಲಿಸ್ ಠಾಣೆಯಲ್ಲಿ ಆರಕ್ಷಕ ಉಪನೀರಿಕ್ಷಕನಾಗಿ ಎಂದು ಕರ್ತವ್ಯ ನಿರ್ವಹಿಸಿರುತ್ತೇನೆ.

ನಾನು ದಿಃ 25-08-2014 ರಂದು ಬೆಳಿಗ್ಗೆ 10-30 ಗಂಟೆಗೆ ನಾನು ಠಾಣಾ ಪ್ರಭಾರದಲ್ಲಿದ್ದಾಗ ಚಾಸಾಃ 1 ರವರು ಠಾಣೆಗೆ ಹಾಜರಾಗಿ ಒಂದು ಲಿಖಿತ ದೂರನ್ನು ಸಲ್ಲಿಸಿದರು. ಸದರಿ ದೂರಿನ ಆಧಾರದ ಮೇಲೆ ನಮ್ಮ ಠಾಣೆಯ ಗುನ್ನೆ ನಂಬರ 209/2014 ನ್ನು ದಾಖಲಿಸಿಕೊಂಡು ಪ್ರ.ವ. ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ಕಳುಹಿಸಿಕೊಟ್ಟೆನು. ಸದರಿ ದೂರನ್ನು ಈಗ ನೋಡುತ್ತಿದ್ದು ಅದನ್ನು ಈಗಾಗಲೇ ನಿಪಿ-1 ಎಂದು ಗುರುತಿಸಲಾಗಿದೆ. ಅದರಲ್ಲಿನ ಸಾಕ್ಷಿಯ ಸಹಿಯನ್ನು ನಿಪಿ-1 (ಬಿ) ಎಂದು ಗುರುತಿಸಲಾಯಿತು. ಪ್ರ.ವ. ವರದಿಯನ್ನು ಈಗ ನೋಡುತ್ತಿದ್ದು ಅದನ್ನು ನಿಪಿ- 5 ಎಂದು ಸಾಕ್ಷಿಯ ಸಹಿಯನ್ನು ನಿಪಿ-5 (ಎ) ಎಂದು ಗುರುತಿಲಾಯಿತು. ನಂತರ ಅದೇ ದಿನ ಗುನ್ನೆ ಸ್ದಳಕ್ಕೆ ಭೇಟಿ ನೀಡಿ ಚಾ ಸಾ 2 ಮತ್ತು 3 ರವರ ಸಮಕ್ಷಮ ಚಾ ಸಾ 1 ರವರು ತೋರಿಸಿದ ಸ್ದಳದಲ್ಲಿ ಸಾಯಂಕಲಾ 04-00 ರಿಂದ 05-00 ಗಂಟೆಯ ವರೆಗೆ ಗುನ್ನೆ ಸ್ದಳದ ಪಂಚನಾಮೆಯನ್ನು ಜರುಗಿಸಿದೆನು. ಸಾಕ್ಷಿಯು ಸದರಿ ಪಂಚನಾಮೆಯನ್ನು ನೋಡಿ ಗುರುಸಿದ್ದುಅದನ್ನು ಈಗಾಗಲೆ ನಿ ಪಿ 2 ಎಂದು ಗುರುತಿಸಲಾಗಿದೆ ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ ಪಿ 2(ಸಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಮುಂದುವರೆದು ಪಂಚನಾಮಯ ಕಾಲಕ್ಕೆ ಒಂದು ಹಿಡಿ ಗಾತ್ರದಷ್ಟು ತೋಗರಿಬೇಳೆಯನ್ನು ವಶಕ್ಕೆ ಪಡೆದುಕೊಂಡಿರುತ್ತೇನೆ. ಸಾಕ್ಷಿಯು ಸದರಿ ಬೇಳೆಯನ್ನು ನೋಡಿ ಗುರುತಿಸಿದ್ದು ಅದನ್ನು ಮು ಮಾ 1 ಎಂದು ಗುರುತಿಸಲಾಗಿದೆ. ನಂತರ ಅದೇ ದಿನ ಚಾ ಸಾ 4 ರಿಂದ 8 ರವರ ಹೇಳಿಕೆಯನ್ನು ದಾಖಲಿಸಿರುತ್ತೆನೇ. ನಂತರ 20-09-2014 ರಂದು ಕೋಡ್ಲಾ ಗ್ರಾಮದ 643 ನೇದ್ದರಲ್ಲಿ

ತೋಗರಿಬೇಳೆ ಹಾನಿಯಾಗಿರುವ ಬಗ್ಗೆ ಚಾ ಸಾ 9ರವರಿಂದ ವರದಿಯನ್ನು ಸ್ವೀಕರಿಸಿರುತ್ತೆನೆ. ಸದರಿ ವರದಿಯನ್ನು ಈಗಾಗಲೇನಿ ಪಿ 4 ಎಂದು ಗುರುತಿಸಲಾಗಿದೆ ಅದರಲ್ಲಿನ ಸಾಕ್ಷಿಯ ಸಹಿಯನ್ನು ನಿ ಪಿ 4(ಬಿ) ಎಂದು ಗುರುತಿಸಲಾಯಿತು. ನಂತರ ಸದರಿ ಪ್ರಕರಣದ ಕಡತವನ್ನು ಚಾ ಸಾ 11 ರವರಿಗೆ ವಹಿಸಿಕೊಟ್ಟಿರುತ್ತೇನೆ.

**ಪಾಟೀಸವಾಲುಃ** ಆರೋಪಿ ಪರ ಶ್ರೀ ಬಿ ಟಿ ವಕೀಲರಿಂದ ಃ

ಚಾ ಸಾ 1 ರವರು ಯಾವ ವಸ್ತುವಿನಿಂದ ಕೀಟಾನಾಶಕ ಸಿಂಪಡಣೆ ಮಾಡಿರುತ್ತಾರೆ ಎಂಬುದರ ಕುರಿತು ನಾನು ಹೇಳಿಲ್ಲ. ನಿ ಪಿ 1 ರಲ್ಲಿ ಮಷೀನ್ ನಿಂದ ಸಿಂಪಡಿಸಿದ ಬಗ್ಗೆ ಹೇಳಿದ್ದಾರೆ ಎಂದರೆ ಸರಿಯಿಲ್ಲ.

ದಿಃ 25-08-2014 ರಂದು ಬೆಳಿಗ್ಗೆ 10-30 ಗಂಟೆಗೆ ನಾನು ಠಾಣಾ ಪ್ರಭಾರದಲ್ಲಿದ್ದಾಗ ಚಾಸಾಃ 1 ರವರು ಠಾಣೆಗೆ ಹಾಜರಾಗಿ ಒಂದು ಲಿಖಿತ ದೂರನ್ನು ಸಲ್ಲಿಸಿದರ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಿಲ್ಲ. ಸದರಿ ದೂರಿನ ಆಧಾರದ ಮೇಲೆ ನಮ್ಮ ಠಾಣೆಯ ಗುನ್ನೆ ನಂಬರ 209/2014 ನ್ನು ದಾಖಲಿಸಿಕೊಂಡು ಪ್ರ.ವ. ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ಕಳುಹಿಸಿಕೊಟ್ಟೆನು ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಿಲ್ಲ. ನಂತರ ಅದೇ ದಿನ ಗುನ್ನೆ ಸ್ಥಳಕ್ಕೆ ಭೇಟಿ ನೀಡಿ ಚಾ ಸಾ 2 ಮತ್ತು 3 ರವರ ಸಮಕ್ಷಮ ಚಾ ಸಾ 1 ರವರು ತೋರಿಸಿದ ಸ್ಥಳದಲ್ಲಿ ಸಾಯಂಕಲಾ 04-00 ರಿಂದ 05-00 ಗಂಟೆಯ ವರೆಗೆ ಗುನ್ನೆ ಸ್ಥಳದ ಪಂಚನಾಮೆಯನ್ನು ಜರುಗಿಸಿದೆನು ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಿಲ್ಲ. ನಂತರ ಅದೇ ದಿನ ಚಾ ಸಾ 4 ರಿಂದ 8 ರವರ ಹೇಳಿಕೆಯನ್ನು ದಾಖಲಿಸಿರುತ್ತೆನೇ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಿಲ್ಲ. ನಂತರ 20-09-2014 ರಂದು ಕೋಡ್ಲಾ ಗ್ರಾಮದ 643 ನೇದ್ದರಲ್ಲಿ ತೋಗರಿಬೇಳೆ ಹಾನಿಯಾಗಿರುವ ಬಗ್ಗೆ ಚಾ ಸಾ 9ರವರಿಂದ ವರದಿಯನ್ನು ಸ್ವೀಕರಿಸಿರುತ್ತೆನೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಿಲ್ಲ.

ಮರುವಿಚಾರಣೆಃ ಇಲ್ಲ
**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ. ಹೇ. ಕೇ. ಸರಿ. ಇದೆ.**

**ಪ್ರ. ದ. ನ್ಯಾ. ದಂ. ಸೇಡಂ.**